**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಪ್ರಾಣೇಶ್ ಎಂ.ಕೆ. ರವರು 72 ರ ನಿಯಮದ ಮೇರೆಗೆ ನೀಡಿರುವ ಸೂಚನೆಗೆ ಸರ್ಕಾರದ ಹೇಳಿಕೆ.**

**ಸೂಚನೆ**

ಕಳಸ ತಾಲ್ಲೂಕು ರಚನೆ ಕುರಿತು ಅಂತಿಮ ಅಧಿಸೂಚನೆ ಹೊರಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯಬಯಸುತ್ತೇನೆ.

-*-*-*-

**ಹೇಳಿಕೆ**

ಸರ್ಕಾರದ ಆದೇಶ ಸಂಖ್ಯೆ: ಕಂಇ 25 ಭೂದಾಪು 2019 ದಿನಾಂಕ: 28.02.2019 ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಕಳಸಾ ಸೇರಿದಂತೆ ಒಟ್ಟು 12 ಹೊಸ ತಾಲ್ಲೂಕುಗಳನ್ನು ರಚನೆ ಮಾಡಲು ತಾತ್ವಿಕವಾಗಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ.

ಕಂದಾಯ ಇಲಾಖೆಯ ವತಿಯಿಂದ ಹೊಸ ತಾಲ್ಲೂಕು ಕಛೇರಿಯನ್ನು ತೆರೆಯಲು ಮತ್ತು ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತ ಹಂತವಾಗಿ ತೆರೆಯಲು ಸಹ ಅನುಮತಿ ನೀಡಲಾಗಿದೆ.

ಈ ನೂತನ ತಾಲ್ಲೂಕುಗಳಿಗೆ ಯಾವ ಯಾವ ಗ್ರಾಮಗಳನ್ನು ಸೇರಿಸಬೇಕೆಂಬ ಬಗ್ಗೆ ಹಿಂದಿನ ತಾಲ್ಲೂಕು ಪುನರ್ ರಚನಾ ಸಮಿತಿಗಳ ಶಿಫಾರಸ್ಸುಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಮಾರ್ಪಾಡು ಮಾಡಬೇಕಾಗಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಂಬಂಧಪಟ್ಟ ಶಾಸಕರು ಮತ್ತು ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿ, ಸಭಾ ನಡವಳಿ ಹಾಗೂ ಕರಡು ಪ್ರಾಥಮಿಕ ಅಧಿಸೂಚನೆಯನ್ನು ಸಲ್ಲಿಸುವಂತೆ ಕೋರಲಾಗಿತ್ತು. ಅದರಂತೆ ಚಿಕ್ಕಮಗಳೂರು ಜಿಲ್ಲಾಧಿಕಾರಿಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಸ್ವೀಕೃತವಾಗಿದೆ.

ಜಿಲ್ಲಾಧಿಕಾರಿಗಳ ಪ್ರಸ್ತಾವನೆಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದ್ದು, ಶೀಘ್ರದಲ್ಲಿಯೇ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗುವುದು.

**ಸಂಖ್ಯೆ: ಕಂಇ 40 ಎಸ್‌ಎಸ್‌ಸಿ 2020**

**(ಆರ್. ಅಶೋಕ)**
ಕಂದಾಯ ಸಚಿವರು